ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಮಡಿಕೇರಿಯಲ್ಲಿ ನಿರ್ಮಾಣವಾಗುತ್ತಿರುವ ಕೊಡವ ಹೆರಿಟೇಜ್ ಕೇಂದ್ರದ ಕಾಮಗಾರಿ ವಿಳಂಬವಾಗುತ್ತಿರುವ ಬಗ್ಗೆ

ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :-

706 (686) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ನಿರ್ಮಾಣಗೊಳ್ಳುತ್ತಿರುವ ಕೊಡವ ಹೆರಿಟೇಜ್ ಕೇಂದ್ರದ ಕಾಮಗಾರಿಯ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಕಾಮಗಾರಿಯು ಅನುಮೋದನೆಗೊಂಡ ವರ್ಷ ಯಾವುದು ;

(ಇ) ಸದರಿ ಕಾಮಗಾರಿಗೆ ಇಲ್ಲಿಯವರೆಗೆ ಬಿಡುಗಡೆಯಾಗಿರುವ ಅನುದಾನದ ಸಂಪೂರ್ಣ ವಿವರ ನೀಡುವುದು ;

(ಈ) ಪ್ರಸ್ತುತ ಕಾಮಗಾರಿಯು ಯಾವ ಹಂತದಲ್ಲಿದೆ ಹಾಗೂ ವಿಳಂಬಕ್ಕೆ ಕಾರಣಗಳೇನು ;

(ಉ) ಯಾವ ಕಾಲಮಿತಿಯೊಳಗೆ ಈ ಕಾಮಗಾರಿಯನ್ನು ಪೂರ್ಣಗೊಳಿಸಿ, ಲೋಕಾರ್ಪಣೆಗೊಳಿಸಲಾಗುವುದು ?